**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ -66/2018**
**ಚಾಸಾ - 01 /** ಪ್ರಾಸಾ - 01

| | |
|---|---|
| ಹೆಸರು | ರವಿ |
| ತಂದೆಯ ಹೆಸರು | **ಮೋಟಯ್ಯ** |
| ವಯಸ್ಸು | **51** |
| ಉದ್ಯೋಗ | **ವ್ಯವಸಾಯ** |
| ವಿಳಾಸ | **ಕೆಂಚನಹಳ್ಳಿ** |

**ದಿನಾಂಕಃ 11-12-2025ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಮೃತ ವ್ಯಕ್ತಿಯು ನನ್ನ ತಂಗಿಯ ಗಂಡ. ನಾನು ಖಾಸಗಿ ಕೆಲಸದ ನಿಮಿತ್ತ ಪೋ. ಠಾಣೆಗೆ ಹೋಗಿದ್ದಾಗ ಪೋಲೀಸರು ನನ್ನಿಂದ ಕೆಲವು ಖಾಲಿ ಹಾಳೆಗಳ ಮೇಲೆ ಸಹಿಯನ್ನು ಪಡೆದುಕೊಂಡರು. ಈಗ ಸಾಕ್ಷಿಗೆ ದೂರನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ದೂರನ್ನು ನಿಪಿ-1 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಪಂಚನಾಮೆಯನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಪಂಚನಾಮೆಯನ್ನು ನಿಪಿ-2 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿಪಿ-2ಕ್ಕೆ ನನ್ನ ಜೊತೆ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಪೋಲೀಸರು ಯಾವುದೇ ವಾಹನವನ್ನು ವಶಪಡಿಸಿಕೊಂಡಿಲ್ಲ. ನನಗೆ ನಿಪಿ-1 ಮತ್ತು ನಿಪಿ-2ರಲ್ಲಿ ಇರುವ ವಿಷಯದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

ಪಾಟೀ **ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿ.12-11-2016 ರಂದು ಸಾರ್ವಜನಿಕರು ನಿಮಗೆ ಕರೆ ಮಾಡಿ ಬೆಳಗ್ಗೆ ಸುಮಾರು 11.30ರ ಸಮಯದಲ್ಲಿ ಮಾಗಡಿ ಮುಖ್ಯ ರಸ್ತೆಯ ದೇವಮಾಚೋಹಳ್ಳಿ ಹಾಗೂ ಬೈಚಗುಪ್ಪೆ ಗ್ರಾಮದ ಕ್ರಾಸ್ ಬಳಿ ಕಾರು ಡಿಕ್ಕಿ ಹೊಡೆದ ಅಪಘಾತ ಆಗಿದೆ ಎಂದು ತಿಳಿಸಿದರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ತಕ್ಷಣ ನೀವು ಸ್ಥಳಕ್ಕೆ ಹೋಗಿ ನೋಡಿದಾಗ ಸದರಿ ವಿಷಯವು ನಿಜವಾಗಿತ್ತು ಮತ್ತು ಸ್ಥಳದಲ್ಲಿ ಕಾರಿನ ಸಂ. ಕೆಎ-02-ಎಂ. ಎಲ್-8567 ಮತ್ತು ದ್ವಿಚಕ್ರ ವಾಹನ ಸಂ.ಕೆಎ-04-ಹೆಚ್ ಡಬ್ಲೂ-4413 ಇದ್ದವು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸಾರ್ವಜನಿಕರು ಮೃತ ವ್ಯಕ್ತಿಯನ್ನು ಸುಂಕದ ಕಟ್ಟೆ ಬಳಿ ಇರುವ ನಿಸರ್ಗ ಆಸ್ಪತ್ರೆಗೆ ಕರೆದುಕೊಂಡು ಹೊಗಿದ್ದು, ನೀವು ಆಸ್ಪತ್ರೆಗೆ ಹೋಗಿ ನೋಡಿದಾಗ ಮೃತ ವ್ಯಕ್ತಿಯ ತಲೆಗೆ ಮತ್ತು ತಲೆಯ ಹಿಂಭಾಗ ತೀವ್ರ ಸ್ವರೂಪದ ರಕ್ತಗಳು ಆಗಿದ್ದವು ಮತ್ತು ಮೈ ಕೈಗೆ ತರಚಿದ ಸಣ್ಣಪುಟ್ಟ ಗಾಯಗಳು ಆಗಿರುತ್ತದೆ ಎಂದು ವೈದ್ಯರು ತಿಳಿಸಿದ್ದು ಮತ್ತು ಅವರು ಮಾರ್ಗ ಮಧ್ಯೆದಲ್ಲಿಯೇ ಮೃತ ಪಟ್ಟಿರುತ್ತಾರೆ ಎಂದು ತಿಳಿಸಿದರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ನೀವು ನಿಮ್ಮ ತಂಗಿಯಾದ ಚಾಸಾ-8ರವರ ಬಳಿ ವಿಚಾರಿಸಿದಾಗ ಅವರು ದಿ.12-01-2016 ರಂದು ಮೃತ ವ್ಯಕ್ತಿಯು ಬೆಳಗ್ಗೆ 10.30ರ ಸಮಯದಲ್ಲಿ ಮನೆಯಿಂದ ಹೊರಟು ಕೆಂಚನಹಳ್ಳಿ ಗ್ರಾಮಕ್ಕೆ ಹೋಗಲು ಅವರ ದ್ವಿಚಕ್ರ ವಾಹನ ಸಂ. ಕೆಎ-04-ಹೆಚ್ ಡಬ್ಲೂ-4413ಯನ್ನು ಚಾಲನೆ ಮಾಡಿಕೊಂಡು ಹೋಗುತ್ತಿದ್ದ ಸಮಯದಲ್ಲಿ ಮಾಗಡಿ ಮುಖ್ಯ ರಸ್ತೆಯ ದೇವಮಾಚೋಹಳ್ಳಿಯ ಬೈಚಕುಪ್ಪೆ ಕ್ರಾಸ್ ಬಳಿ ಯಲ್ಲಿ ಹಿಂಬದಿಯಿಂದ ಬಂದ ಈ ಮೇಲೆ ಹೇಳಿರುವ ಕಾರಿನ ಚಾಲಕ ತನ್ನ ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ದ್ವಿಚಕ್ರ ವಾಹನಕ್ಕೆ ಡಿಕ್ಕಿಪಡಿಸಿದ ಪರಿಣಾಮ ವಾಹನದ ಸಮೇತ ಮೃತ ವ್ಯಕ್ತಿಯು ಕೆಳಗೆ ಬಿದ್ದು ಅಪಘಾತವು ಸಂಭವಿಸಿರುತ್ತದೆ ಎಂದು ತಿಳಿಸಿದರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ನೀವು ದಿ.12-11-2016 ರಂದು ನಿಪಿ-1ರಂತೆ ದೂರನ್ನು ನೀಡಿರುತ್ತೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ನಿಪಿ-1ರ ಆಧಾರದ ಮೇಲೆ ದಿ.13-11-2016 ರಂದು ಬೆಳಗ್ಗೆ 7.20 ರಿಂದ 8.20ರವರೆಗೆ ನೀವು ತೋರಿಸಿದ ಜಾಗದಲ್ಲಿ ಪೋಲೀಸರು ನಿಪಿ-2ರಂತೆ

ಪಂಚನಾಮೆಯನು ಮಾಡಿ ನಿಮ್ಮ, ಚಾಸಾ-3 ಮತ್ತು 4ರವರ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ಈ ಮೇಲೆ ಹೇಳಿರುವ ವಾಹನಗಳನ್ನು ವಶಪಡಿಸಿಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ಒಂದು ಕಚ್ಚಾ ನಕ್ಷೆಯನ್ನು ತಯಾರು ಮಾಡಿದರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಪಾಟೀ **ಸವಾಲುಃ- ಆರೋಪಿಯ ಪರ ಶ್ರೀ.ಡಿ. ಎನ್. ಎಂ , ವಕೀಲರಿಂದಃ-**

ಆರೋಪಿಯ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2ನೇ ಅ. ನ್ಯಾ . ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**